4. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

(ಅ) ಕರ್ನಾಟಕ ಭೋಗ ವಸ್ತುಗಳ ಮೇಲೆ ತೆರಿಗೆ (ತಿದ್ದುಪಡಿ) ವಿಧೇಯಕ, 2001.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎಂ.ಶಿವಣ್ಣ(ಹಣಕಾಸು ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, ಸನ್ಮಾನ್ಯ ಮುಖ್ಯಮಂತ್ರಿಗಳ ಪರವಾಗಿ 2001ನೇ ಸಾಲಿನ ಕರ್ನಾಟಕ ಭೋಗ ವಸ್ತುಗಳ ಮೇಲೆ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ 2001ನೇ ಸಾಲಿನ ಕರ್ನಾಟಕ ಭೋಗ ವಸ್ತುಗಳ ಮೇಲೆ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎಂ.ಶಿವಣ್ಣ(ಹಣಕಾಸು ರಾಜ್ಯಸಚಿವರು): ಮಾನ್ಯ ಅಧ್ಯಕ್ಷರೆ, 2001ನೇ ಸಾಲಿನ ಕರ್ನಾಟಕ ಭೋಗ ವಸ್ತುಗಳ ಮೇಲೆ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

(ಆ) ಕರ್ನಾಟಕ ಮೇಲ್ಪಾಟು ಮಂಡಳಿಗಳ (ತಿದ್ದುಪಡಿ) ವಿಧೇಯಕ 2001.

ಶ್ರೀ ಬಿ.ಬಿ. ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, 2001ನೇ ಸಾಲಿನ ಕರ್ನಾಟಕ ಮೇಲ್ಪಾಟು ಮಂಡಲಿಗಳ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, 2001ನೇ ಸಾಲಿನ ಕರ್ನಾಟಕ ಮೇಲ್ಪಾಟು ಮಂಡಲಿಗಳ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

X ಅನುಬಂಧ I

ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು): ಮಾನ್ಯ ಅಧ್ಯಕ್ಷರೆ, 2001ನೇ ಸಾಲಿನ ಕರ್ನಾಟಕ ಮೇಲ್ಪಾಟು ಮಂಡಲಿಗಳ (ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : X ವಿಧೇಯಕವನ್ನು ಮಂಡಿಸಲಾಗಿದೆ. X

(ಇ) ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳು (ತಿದ್ದುಪಡಿ) ವಿಧೇಯಕ, 2001.

ಶ್ರೀ ಎ.ಎಂ.ಹಿಂಡಸಗೇರಿ(ಕಾರ್ಮಿಕ ಸಚಿವರು): ಮಾನ್ಯ ಅಧ್ಯಕ್ಷರೆ, 2001ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, 2001ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯ ಸಂಸ್ಥೆಗಳು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ.ಎಂ.ಹಿಂಡಸಗೇರಿ(ಕಾರ್ಮಿಕ ಸಚಿವರು):ಮಾನ್ಯ ಅಧ್ಯಕ್ಷರೆ, 2001ನೇ ಸಾಲಿನ ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: X ವಿಧೇಯಕವನ್ನು ಮಂಡಿಸಲಾಗಿದೆ. X

ಈಗ ಸಭೆಯನ್ನು ಮುಂದೂಡಿ, ಪುನಃ ಮಧ್ಯಾಹ್ನ 3 ಗಂಟೆಗೆ ಸಭೆ ಸೇರುವುದು.

(ಸಭೆಯು 1 ಗಂಟೆ 50 ನಿಮಿಷಗಳಿಗೆ ಮುಂದೂಡಲ್ಪಟ್ಟು ಪುನಃ ಮಧ್ಯಾಹ್ನ 3 ಗಂಟೆಗೆ ಸಭೆ ಸೇರಲು ನಿಶ್ಚಯಿಸಲಾಯಿತು)

X ಅನುಬಂಧ II, III